# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 254

ಮಾನ್ಯ ಸದಸ್ಯರ ಹೆಸರು : ಶ್ರೀ ಪ್ರತಾಪ್ ಸಿಂಹ ನಾಯಕ್ ಕೆ.
(ವಿಧಾನಸಭೆಯಿಂದ ಚುನಾಯಿತರಾದವರು)

ಉತ್ತರಿಸುವ ದಿನಾಂಕ : 6.3.2025

ಉತ್ತರಿಸುವವರು : ಮಾನ್ಯ ಮುಖ್ಯಮಂತ್ರಿಗಳು

<table>
<tr><th>ಕ್ರ. ಸಂ.</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ)</td><td>2006ರ ನಂತರದಲ್ಲಿ ನೇಮಕಗೊಂಡ ರಾಜ್ಯ ಸರ್ಕಾರಿ ನೌಕರರು, ಈ ಹಿಂದೆ ಇದ್ದ "ಹಳೆಯ ಪಿಂಚಣಿ ಯೋಜನೆ" ಯನ್ನು ಜಾರಿಗೊಳಿಸಲು ಆಗ್ರಹಿಸಿ, ಪ್ರತಿಭಟನೆಗಿಳಿದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;</td><td rowspan="4">ರಾಜ್ಯದಲ್ಲಿ ಜಾರಿಯಲ್ಲಿರುವ ರಾಷ್ಟ್ರೀಯ ಪಿಂಚಣಿ ಯೋಜನೆಯ ಬದಲಾಗಿ ಹಳೆಯ ಪಿಂಚಣಿ ಯೋಜನೆಯನ್ನು ಜಾರಿಮಾಡುವ ಸಾಧ್ಯತೆಗಳ ಕುರಿತು ಪರಿಶೀಲಿಸಲು ಈಗಾಗಲೇ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಅಧ್ಯಕ್ಷತೆಯಲ್ಲಿ ದಿನಾಂಕ: 11.12.2018ರ ಮತ್ತು ದಿನಾಂಕ: 01.03.2023 ರ ಸರ್ಕಾರಿ ಆದೇಶಗಳನ್ವಯ ರಚಿಸಲಾಗಿರುವ ಸಮಿತಿಯನ್ನು ದಿನಾಂಕ: 16.08.2024ರಲ್ಲಿ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಇವರ ಅಧ್ಯಕ್ಷತೆಯಲ್ಲಿ ಪುನರ್ ರಚಿಸಿ ಆದೇಶಿಸಲಾಗಿದೆ.<br><br>ಸಮಿತಿಗೆ ಹಿಂದಿನ ಡಿಫೈನ್ಡ್ ಪಿಂಚಣಿ ಯೋಜನೆಯನ್ನು ಮರು ಜಾರಿ ಮಾಡಿರುವ ರಾಜ್ಯಗಳಲ್ಲಿ ಈ ಯೋಜನೆಯನ್ನು ಅನುಷ್ಠಾನಗೊಳಿಸಿರುವ ಕುರಿತು ಕೈಗೊಂಡಿರುವ ಕ್ರಮದ ಬಗ್ಗೆ ಅಧ್ಯಯನ ನಡೆಸಿ ವರದಿ ಸಲ್ಲಿಸಲು ಸೂಚಿಸಿದೆ.</td></tr>
<tr><td>ಆ)</td><td>ಬಂದಿದ್ದಲ್ಲಿ, ಆರ್ಥಿಕ ಸಂಪನ್ಮೂಲ ಮತ್ತು ಆದಾಯಗಳ ಕ್ರೋಢೀಕರಣದ ದೃಷ್ಟಿಯಿಂದ ಕರ್ನಾಟಕ ರಾಜ್ಯಕ್ಕಿಂತ ಬಹಳ ಹಿಂದಿರುವ ದೇಶದಲ್ಲಿನ ಬಹುತೇಕ ರಾಜ್ಯಗಳು ಈಗಾಗಲೇ ತನ್ನ ಸರ್ಕಾರಿ ನೌಕರರಿಗೆ "ಹಳೆಯ ಪಿಂಚಣಿ ಯೋಜನೆ" ಯನ್ನು ಮರು ಜಾರಿಗೊಳಿಸಿದ್ದು, ಕರ್ನಾಟಕ ಸರ್ಕಾರ ಮಾತ್ರ ಇದುವರೆವಿಗೂ ಈ ಯೋಜನೆ ಜಾರಿಗೊಳಿಸದೇ ಇರಲು ಯಾವುದಾದರೂ ಸಕಾರಣಗಳಿವೆಯೇ; (ವಿವರ ನೀಡುವುದು)</td></tr>
<tr><td>ಇ)</td><td>ಆರ್ಥಿಕ ಪ್ರಗತಿ ಹಾಗೂ ಅಭಿವೃದ್ಧಿ ದೃಷ್ಟಿಯಲ್ಲಿ ದೇಶದ ಬಹುತೇಕ ರಾಜ್ಯಗಳಿಗಿಂತ ಸಾಕಷ್ಟು ಮುಂದಿರುವ ಕರ್ನಾಟಕ ರಾಜ್ಯ ಸರ್ಕಾರಿ ನೌಕರರಿಗೆ "ಹಳೆಯ ಪಿಂಚಣಿ ಯೋಜನೆ" ಯನ್ನು ಮರು ಜಾರಿಗೊಳಿಸಲು ಈ ಕೂಡಲೇ ಕ್ರಮವಹಿಸುವುದೇ;</td></tr>
<tr><td>ಈ)</td><td>ಯಾವ ಕಾಲಮಿತಿಯೊಳಗೆ "ಹಳೆಯ ಪಿಂಚಣಿ ಯೋಜನೆ" ಯನ್ನು ಸರ್ಕಾರ ಮರು ಜಾರಿಗೊಳಿಸುವುದು?</td></tr>
</table>

ಆಇ-ಪಿಇಎನ್/ 77 /2025

(ಸಿದ್ದರಾಮಯ್ಯ)
**ಮುಖ್ಯಮಂತ್ರಿ**